# ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಒಂಭತ್ತನೇ ಅಧಿವೇಶನ)

**ಕಾರ್ಯಕಲಾಪಗಳ ಪಟ್ಟಿ**

ಬುಧವಾರ, ದಿನಾಂಕ 9ನೇ ಮಾರ್ಚ್, 2011

(ಸಮಯ: ಬೆಳಿಗ್ಗೆ 10.00 ಗಂಟೆಗೆ)

---

## 1. ವಿತ್ತೀಯ ಕಾರ್ಯಕಲಾಪಗಳು

1. 2011-12ನೇ ಸಾಲಿನ ಆಯವ್ಯಯ ಅಂದಾಜುಗಳ ಕುರಿತು ನಡೆದ ಸಾಮಾನ್ಯ ಚರ್ಚೆಗೆ ಸರ್ಕಾರದ ಉತ್ತರ.
2. 2010-11ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಕುರಿತು ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

## 2. ಪ್ರಶ್ನೋತ್ತರ

| | | |
|---|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಎಂಟನೇ ಪಟ್ಟಿ |
| ಆ) ದಿನಾಂಕ 7ನೇ ಮಾರ್ಚ್,2011 ರ ಆರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಟಿ.ಬಿ. ಜಯಚಂದ್ರ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 87(638) | : | ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು |
| ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಎಂಟನೇ ಪಟ್ಟಿ |

## 3. ಶಾಸನ ರಚನೆ

### 1. ವಿಧೇಯಕವನ್ನು ಮಂಡಿಸುವುದು

**1. ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕ, 2011**

**ಶ್ರೀ ಜಗದೀಶ್ ಶೆಟ್ಟರ್, (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ. ಹಾಗೂ ವಿಧೇಯಕವನ್ನು ಮಂಡಿಸುವುದು.

**2. ಕರ್ನಾಟಕ ಗೃಹ ರಕ್ಷಕ ದಳ (ತಿದ್ದುಪಡಿ) ವಿಧೇಯಕ, 2011**

**ಶ್ರೀ ಆರ್. ಅಶೋಕ್ ( ಗೃಹ ಮತ್ತು ಸಾರಿಗೆ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ಗೃಹ ರಕ್ಷಕ ದಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ. ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ.

**3. ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕ, 2011**
**ಶ್ರೀ, ಡಾ|| ವಿ.ಎಸ್. ಆಚಾರ್ಯ, ( ಉನ್ನತ ಶಿಕ್ಷಣ, ಯೋಜನಾ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ. ಹಾಗೂ ವಿಧೇಯಕವನ್ನು ಮಂಡಿಸುವುದು.

## 2. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**(1) ಕರ್ನಾಟಕ (ಪ್ರಾದೇಶಿಕ ಕಾನೂನುಗಳ) ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕ, 2009**
**ಶ್ರೀ ಎಸ್.ಸುರೇಶ್‌ಕುಮಾರ್, (ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು) ಅವರು:-**

ಅ. ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2009ನೇ ಸಾಲಿನ ಕರ್ನಾಟಕ (ಪ್ರಾದೇಶಿಕ ಕಾನೂನುಗಳ) ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**(2) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2011**
**ಶ್ರೀ ಲಕ್ಷ್ಮಣ ಎಸ್. ಸವದಿ, (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು)ಅವರು:-**

ಅ. ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**(3) ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2011**
**ಶ್ರೀ ಬಿ.ಎನ್. ಬಚ್ಚೇಗೌಡ, (ಕಾರ್ಮಿಕ ಸಚಿವರು) ಅವರು:-**

ಅ. 2011ನೇ ಸಾಲಿನ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ ಅವರು ಪ್ರವಾಹಕ್ಕೆ ಒಳಗಾದ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಮತ್ತು ಗ್ರಾಮಗಳಿಗೆ ಸಂಪರ್ಕ ರಸ್ತೆಗಳನ್ನು ಕಲ್ಪಿಸುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಎಂ.ಕೃಷ್ಣಪ್ಪ ಅವರು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಬಿ.ಬಿ.ಎಂ.ಪಿ ಸರಹದ್ದಿನವರೆಗೆ ರಸ್ತೆ ಚೆನ್ನಾಗಿದ್ದು ನಂತರದ ರಸ್ತೆಯು ಚಿಕ್ಕದಾಗಿದ್ದು ಹಳ್ಳ ದಿಣ್ಣೆಗಳಿಂದ ಕೂಡಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಯು.ಟಿ. ಖಾದರ್ ಅವರು ಕರಾವಳಿ ಪ್ರದೇಶದ ರೈತರಿಗೆ ಪಶ್ಚಿಮ ವಾಹಿನಿ ಯೋಜನೆಯು ಅನುಷ್ಠಾನಗೊಳ್ಳದೇ ಇರುವುದರಿಂದ ತೀವ್ರ ತೊಂದರೆಯಾಗಿರುವ ಬಗ್ಗೆ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಗಮನ ಸೆಳೆಯುವುದು.

4. ಡಾ|| ಎಂ.ಸಿ. ಸುಧಾಕರ್ ಅವರು ಚಿಂತಾಮಣಿ ತಾಲ್ಲೂಕಿನ ಕೈವಾರ ಯಾತ್ರಾ ಸ್ಥಳದಲ್ಲಿರುವ ಹೊರ ಪೊಲೀಸ್ ಠಾಣೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಗೃಹ ಮತ್ತು ಸಾರಿಗೆ ಸಚಿವರ ಗಮನ ಸೆಳೆಯುವುದು.

5. ಶ್ರೀ ನೆ.ಲ.ನರೇಂದ್ರಬಾಬು ಅವರು ರಾಜ್ಯದಲ್ಲಿ ಹಲವಾರು ಕಂಪನಿಗಳು ಸಾವಿರಾರು ಜನರನ್ನು ವಿಮಾದಾರರನ್ನಾಗಿ ಮಾಡಿಕೊಂಡು ಕೋಟ್ಯಾಂತರ ರೂಪಾಯಿ ಹಣವನ್ನು ಲೂಟಿ ಮಾಡುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6. ಶ್ರೀ ಎನ್.ಸಂಪಂಗಿ ಅವರು ಬನ್ನೇರುಘಟ್ಟ ವನ್ಯಜೀವಿ ಧಾಮದಲ್ಲಿ ಇತ್ತೀಚಿನ ದಿನಗಳಲ್ಲಿ ಅನೇಕ ಸಿಂಹಗಳು ಮತ್ತು ಹುಲಿಗಳು ಮೃತವಾಗುತ್ತಿದ್ದು ಹಾಗೂ ವನ್ಯ ಜೀವಿಗಳಿಗೆ ಸಾಕಷ್ಟು ಪೌಷ್ಠಿಕ ಆಹಾರ ನೀಡದಿರುವ ಬಗ್ಗೆ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

7. ಶ್ರೀ ಕುಲಕರ್ಣಿ ಸುಬ್ಬರಾವ್ ಅವರು ಕೃಷ್ಣ ನದಿಯಿಂದ ಜಮಖಂಡಿ ನಗರಕ್ಕೆ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಮತ್ತು ಹಕ್ಕುಗಳು, ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

8. ಶ್ರೀಯುತರಾದ ಅಮರೇಶ್ ಹಾಗೂ ಕಿಮ್ಮನೆ ರತ್ನಾಕರ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದ ವತಿಯಿಂದ ಜಮೀನನ್ನು ಕೊಳ್ಳುವ ಬಗ್ಗೆ ಸರ್ಕಾರ ನೀಡುತ್ತಿರುವ ಹಣವನ್ನು ಹೆಚ್ಚಿಸುವ ಬಗ್ಗೆ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.

9. ಶ್ರೀ ಮಾಲೀಕಯ್ಯ ಗುತ್ತೇದಾರ್ ಅವರು ಗುಲ್ಬರ್ಗಾ–ಚೌಡಾಪುರ ರಸ್ತೆ ಹಾಳಾಗಿದ್ದು ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗಿರುವ ಕುರಿತು ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

**5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ**

1. ಶ್ರೀಯುತರಾದ ಹೆಚ್.ಡಿ.ರೇವಣ್ಣ, ಟಿ.ಬಿ.ಜಯಚಂದ್ರ, ಹೆಚ್.ಕೆ. ಕುಮಾರಸ್ವಾಮಿ, ಸಿ.ಎಸ್.ನಾಡಗೌಡ ಅವರು ಕುಡಿಯುವ ನೀರಿನ ಅಭಾವ ಎದುರಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರಾದ ಹೆಚ್.ಡಿ.ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ ಹಾಗೂ ಇತರರು ಲೋಕೋಪಯೋಗಿ ಇಲಾಖೆಯಲ್ಲಿ ಗುತ್ತಿಗೆದಾರರಿಗೆ ಹಣ ಪಾವತಿ ಮಾಡದಿರುವುದರ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

**6. ಅರ್ಧಗಂಟೆ ಕಾಲಾವಧಿ ಚರ್ಚೆ**

ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್ ಅವರು ಪಡಿತರ ಚೀಟಿ ವಿತರಣೆ ಬಗ್ಗೆ ದಿನಾಂಕ 3ನೇ ಮಾರ್ಚ್, 2011ರಂದು ಸದನದಲ್ಲಿ ಉತ್ತರಿಸುವ ನಾಲ್ಕನೇ ಪಟ್ಟಿಯ ಪ್ರಶ್ನೆ ಸಂಖ್ಯೆ 59(593)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧಗಂಟೆ ಕಾಲ ಚರ್ಚಿಸುವುದು.

**ಎಸ್.ಬಿ. ಪಾಟೀಲ್**
ಕಾರ್ಯದರ್ಶಿ

*Raj N*

**ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
(www.kar.nic.in/kla)